## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1200 (1365) |
| **ಸದಸ್ಯರ ಹೆಸರು** | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| **ಉತ್ತರಿಸ ಬೇಕಾದ ದಿನಾಂಕ** | : | 18.12.2025 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಸಿಂಧನೂರ ತಾಲ್ಲೂಕಿನ ಯದ್ದಲದೊಡ್ಡಿಯ ಸುವರ್ಣಗಿರಿ ವಿರಕ್ತ ಮಠಕ್ಕೆ ಕರ್ನಾಟಕದ ಗಡಿ ಜಿಲ್ಲೆಗಳಾದ ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ನೆರೆಯ ರಾಜ್ಯಗಳಾದ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಅಪಾರ ಸಂಖ್ಯೆಯ ಭಕ್ತಾಧಿಗಳಿದ್ದು, ಪ್ರತೀ ವರ್ಷ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಅಪಾರ ಸಂಖ್ಯೆಯಲ್ಲಿ ಭಕ್ತಾಧಿಗಳು ಶ್ರೀ ಕ್ಷೇತ್ರಕ್ಕೆ ಆಗಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಬಂದಿದ್ದಲ್ಲಿ, ಸರ್ಕಾರವು ಸದರಿ ಭಕ್ತಾಧಿಗಳಿಗೆ ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ; (ವಿವರ ನೀಡುವುದು); | ವಿಶೇಷ ಅಭಿವೃದ್ಧಿ ಯೋಜನೆಯಡಿ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಯದ್ದಲದೊಡ್ಡಿಯ ಸುವರ್ಣಗಿರಿ ವಿರಕ್ತ ಮಠದ ಬಳಿ ರೂ.100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಗೆ ಪೂರ್ಣ ಅನುದಾನ ಬಿಡುಗಡೆ ಮಾಡಿ, ಕಾಮಗಾರಿಯನ್ನು ಪೂರ್ಣಗೊಳಿಸಲಾಗಿರುತ್ತದೆ. |
| ಇ) | ಸದರಿ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? | ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ಯದ್ದಲದೊಡ್ಡಿ ಸುವರ್ಣಗಿರಿ ವಿರಕ್ತ ಮಠಕ್ಕೆ ಮೂಲಭೂತ ಸೌಲಭ್ಯ ಕಲ್ಪಿಸಲು ರೂ.100.00 ಲಕ್ಷಗಳನ್ನು ಬಿಡುಗಡೆ ಮಾಡಲು ಕೋರಿ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಪರಿಶೀಲನೆಯಲ್ಲಿದೆ. |

**ಸಂಖ್ಯೆ:ಟಿಒಆರ್ 316 ಟಿಡಿವಿ 2025**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು